# ಜಿಲ್ಲಾ ಪಂಚಾಯತ್ ಹಾಸನ

## ಅಧಿಕೃತ ಜ್ಞಾಪನ

ವಿಷಯ:- 2012-13ನೇ ಸಾಲಿನ 2ನೇ ತ್ರೈಮಾಸಿಕ ಅನುದಾನವನ್ನು ತಾಲ್ಲೂಕುವಾರು ಹಂಚಿಕೆ ಬಗ್ಗೆ.

ಉಲ್ಲೇಖ:- ಸರ್ಕಾರದ ಅಧಿಕೃತ ಜ್ಞಾಪನ/ಸುತ್ತೋಲೆ/ಆದೇಶ ಸಂಖ್ಯೆ

(1) FD/77/ZPA/2003/Dated:8-9-2004.
(2) FD/04/ZPA/2003/Dated:2-5-2005.
(3) FD/07/ZPA/2003/Dated:14-7-2005.
(4) ಮಮಇ/135/ಐಸಿಡಿ/2012/ಬೆಂಗಳೂರು/ದಿ:25-9-2012
(5) RDPR/IFA/BUD/2011-12/DI:29-3-2011
(6) ಆಇ/18/ಬಿಪಿಇ/2011/ಬೆಂಗಳೂರು/ದಿ:22-12-2011

-o-

ಉಲ್ಲೇಖ(1)ರಲ್ಲಿನ ಆದೇಶದಲ್ಲಿ ಜಿಲ್ಲಾಪಂಚಾಯತ್ ನಿಧಿ/ತಾಲ್ಲೂಕು ಪಂಚಾಯತ್ ನಿಧಿ ಲೆಕ್ಕ ನಿರ್ವಹಣೆ ಬಗ್ಗೆ ವಿವರಿಸಿದೆ. ಅದರಂತೆ ಜಿಲ್ಲಾಪಂಚಾಯತ್/ತಾಲ್ಲೂಕು ಪಂಚಾಯತ್ ನಿಧಿಗಳನ್ನು ಜಿಲ್ಲಾ ಪಂಚಾಯತ್/ತಾಲ್ಲೂಕು ಪಂಚಾಯತ್ ಆಯಾ ನಿಧಿ-I, II ಹಾಗೂ III ಎಂದು ಮೂರು ಭಾಗಗಳಾಗಿ ವಿಂಗಡಿಸಿದೆ. ಅದರಂತೆ ಜಿಲ್ಲಾ/ತಾಲ್ಲೂಕು ಪಂಚಾಯತ್‌ಗಳು ಆಯಾ ನಿಧಿಗಳಲ್ಲಿ ಬರುವ ಯೋಜನೆ ಯಲ್ಲಿನ ಸ್ವೀಕೃತಿ ಮತ್ತು ವೆಚ್ಚಗಳನ್ನು ಲೆಕ್ಕ ಇಡಬೇಕಾಗಿದೆ.ಅದರ ಪ್ರಕಾರವಾಗಿ 2012-13ನೇ ಸಾಲಿನ 2ನೇ ತ್ರೈಮಾಸಿಕ ತಾಲ್ಲೂಕು ಪಂಚಾಯಿತಿಗಳಿಗೆ ಅನುದಾನ ಬಿಡುಗಡೆ ಮಾಡಬೇಕಾಗಿರುವುದರಿಂದ ಈ ಆದೇಶ ಹೊರಡಿಸಲಾಗಿದೆ.

**ಸಂಖ್ಯೆ:ZPH/BUD/TPG-9/2012-13** ದಿನಾಂಕ:19-10-2012

ಉಲ್ಲೇಖ(4)ರ ಸರ್ಕಾರಿ ಆದೇಶದಲ್ಲಿ ಜಿಲ್ಲಾ ವ್ಯಾಪ್ತಿಯ 8 ತಾಲ್ಲೂಕು ಪಂಚಾಯಿತಿಗಳು ಯೋಜನೆಗಳ ಅನುಷ್ಠಾನಕ್ಕಾಗಿ ಕೇಂದ್ರ/ರಾಜ್ಯ ಯೋಜನೆ ಲೆಕ್ಕಶೀರ್ಷಿಕೆಗಳಲ್ಲಿ 2012-13ನೇ ಸಾಲಿನ 2ನೇ ತ್ರೈಮಾಸಿಕ ಪೂರಕ ಆಹಾರ ಕಾರ್ಯಕ್ರಮಕ್ಕೆ ತಾಲ್ಲೂಕುವಾರು ಅನುದಾನ ಬಿಡುಗಡೆ ಮಾಡಲಾಗಿದೆ.

ಹೀಗೆ ಬಿಡುಗಡೆ ಮಾಡಲಾಗಿರುವ ಅನುದಾನವನ್ನು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಆಯಾಯ ತಾಲ್ಲೂಕುಗಳಿಗೆ ಸಂಬಂಧಿಸಿದ ಅನುದಾನವನ್ನು ಬಿಳಿ ಬಣ್ಣದ ಚಲನ್‌ನಲ್ಲಿ ಸರ್ಕಾರದ ಲೆಕ್ಕಕ್ಕೆ ವೆಚ್ಚ ಭರಿಸಿ ಹಳದಿ ಬಣ್ಣದ ಚಲನ್ ಮೂಲಕ ಆಯಾಯ ತಾಲ್ಲೂಕು ಪಂಚಾಯಿತಿ ನಿಧಿ- IIಕ್ಕೆ ಜಮಾ ಮಾಡಿಕೊಳ್ಳಲು ತಿಳಿಸಿದೆ ಹಾಗೂ ಬಿಳಿ/ಹಳದಿ ಬಣ್ಣದ ಪೇಯಿಸ್ ರಸೀದಿ ಮತ್ತು ಹಳದಿ ಚಲನ್ ಮೇಲೆ ತಾಲ್ಲೂಕು ಪಂಚಾಯತ್ ನಿಧಿ-II ಎಂದು ಮೊಹರು ಹಾಕುವುದು.

ಈ ರೀತಿ ತಾಲ್ಲೂಕು ಪಂಚಾಯಿತಿ ನಿಧಿ-IIಕ್ಕೆ ಜಮಾ ಮಾಡಿಕೊಂಡ ಅನುದಾನವನ್ನು ನಿಯಮಾನುಸಾರ ತಾಲ್ಲೂಕು ಪಂಚಾಯತ್ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಅಧಿಕಾರಿಗಳಿಗೆ ಒಂದೇ ಕಂತಿನಲ್ಲಿ ಪೂರ್ಣ ಹಣ ಬಿಡುಗಡೆ ಮಾಡಿ ಅದರ ಒಂದು ಪ್ರತಿಯನ್ನು ಈ ಕಛೇರಿಗೆ ಕಳುಹಿಸಲು ಸೂಚಿಸಿದೆ.

ಅನುಷ್ಠಾನಾಧಿಕಾರಿಗಳು ವೇತನೇತರ ಅನುದಾನಕ್ಕೆ ಸಂಬಂಧಿಸಿದಂತೆ ಸಕ್ಷಮ ಪ್ರಾಧೀಕಾರಿಗಳಿಂದ ಕ್ರಿಯಾ ಯೋಜನೆಗಳಿಗೆ ಅನುಮೋದನೆ ಪಡೆದ ನಂತರವೇ ವೆಚ್ಚ ಭರಿಸತಕ್ಕದ್ದು, ವೆಚ್ಚ ಭರಿಸುವಾಗ ಬಿಲ್ಲಿನ ಮೇಲೆ ತಾಲ್ಲೂಕು ಪಂಚಾಯತ್ ನಿಧಿ-II ಎಂದು ಮೊಹರು ಹಾಕಲು, ಅನುದಾನ ಮರು ಬಿಡುಗಡೆ(ಅನುಷ್ಠಾನಾಧಿಕಾರಿಗಳಿಗೆ) ಮಾಡುವ ಆದೇಶದಲ್ಲಿ ಪ್ರತ್ಯೇಕವಾಗಿ ಸೂಚಿಸಲಾಗುವುದು ಎಂದು ಆದೇಶಿಸಿದೆ.

ಉಲ್ಲೇಖ(6)ರ ಸರ್ಕಾರದ ನಡವಳಿ ಅನುಸಾರ 2012-13ನೇ ಸಾಲಿನ ಆರ್ಥಿಕ ವರ್ಷದ ಅನುದಾನವನ್ನು ನಿಗಧಿತ ಅವಧಿಯೊಳಗೆ ಇಲಾಖೆಗೆ ಬಿಡುಗಡೆಗೊಳಿಸಲು ಹಾಗೂ ಅಧೀನ ಇಲಾಖೆಗಳಿಗೆ ವೇತನ ಸಾದಿಲ್ವಾರು, ಪ್ರವಾಸಭತ್ಯೆ, ಕಾಮಗಾರಿ ಬಿಲ್ಲುಗಳನ್ನು ಅನುದಾನ ವ್ಯವಗತವಾಗದಂತೆ ಬಿಲ್ಲುಗಳನ್ನು ತಯಾರಿಸಿ ಸಕ್ಷಮ ಪ್ರಾಧಿಕಾರದಿಂದ ಮೇಲು ಸಹಿ ಪಡೆದು ನಿಗಧಿತ ಅವಧಿಯೊಳಗೆ ಖಜಾನೆಗೆ ಸಲ್ಲಿಸುವುದು. ಈ ಬಗ್ಗೆ ಅಧೀನ ಇಲಾಖೆಗೆ ಸುತ್ತೋಲೆ ನೀಡಲು ತಿಳಿಸಿದೆ. ವೆಚ್ಚ ಲೆಕ್ಕ ಶೀರ್ಷಿಕೆ: 2235-00-101-0-61.

2)

(ರೂ.ಲಕ್ಷಗಳಲ್ಲಿ)

| ಕ್ರಮ ಸಂಖ್ಯೆ | ತಾಲ್ಲೂಕಿನ ಹೆಸರು | ಡಿಡಿಓ ಕೋಡ್ | 2236-02-197-6-01 | |
|---|---|---|---|---|
| | | | ಯೋಜನೆ | ಯೋಜನೇತರ |
| 1 | ಆಲೂರು | 1301QQ0001 | 27.56 | 0.00 |
| 2 | ಅರಕಲಗೂಡು | 1302QQ0001 | 53.08 | 0.00 |
| 3 | ಅರಸೀಕೆರೆ | 1303QQ0001 | 86.87 | 0.00 |
| 4 | ಬೇಲೂರು | 1304QQ0001 | 0.00 | 83.62 |
| 5 | ಚನ್ನರಾಯಪಟ್ಟಣ | 1305QQ0084 | 0.00 | 113.05 |
| 6 | ಹಾಸನ | 1300QQ0002 | 0.00 | 115.04 |
| 7 | ಹೊಳೆನರಸೀಪುರ | 1306QQ0006 | 0.00 | 88.54 |
| 8 | ಸಕಲೇಶಪುರ | 1307QQ0001 | 44.49 | 0.00 |
| | **ಒಟ್ಟು** | | **212.00** | **400.25** |

ಒಟ್ಟು ಯೋಜನೆಗೆ ರೂ 212.00 ಲಕ್ಷಗಳು(ಎರಡು ಕೋಟಿ ಹನ್ನೆರಡು ಲಕ್ಷ ರೂಪಾಯಿಗಳು ಮಾತ್ರ) ಮತ್ತು ಯೋಜನೇತರಕ್ಕೆ ರೂ 400.25 ಲಕ್ಷಗಳು (ನಾಲ್ಕು ಕೋಟಿ ಇಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ)

(ಸಹಿ)
ಮುಖ್ಯ ಲೆಕ್ಕಾಧಿಕಾರಿ
ಜಿಲ್ಲಾಪಂಚಾಯತ್,ಹಾಸನ.

**<u>ಪ್ರತಿಯನ್ನು:-</u>**

1. ಮಾನ್ಯ ಅಧ್ಯಕ್ಷರು/ಉಪಾಧ್ಯಕ್ಷರು, ಜಿಲ್ಲಾಪಂಚಾಯತ್,ಹಾಸನ ರವರ ಮಾಹಿತಿಗೆ ಸಲ್ಲಿಸಿದೆ.
2. ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ರವರ ಮಾಹಿತಿಗೆ ಸಲ್ಲಿಸಿದೆ.
3. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು ರವರ ಮಾಹಿತಿಗೆ ಸಲ್ಲಿಸಿದೆ.
4. ಉಪಕಾರ್ಯದರ್ಶಿಗಳು(ಆಡಳಿತ) ಮತ್ತು (ಅಭಿವೃದ್ಧಿ), ಮುಖ್ಯ ಯೋಜನಾಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾಸನ ರವರ ಮಾಹಿತಿಗೆ.
5. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್_____________ ತಾಲ್ಲೂಕು ಇವರ ಅಗತ್ಯ ಕ್ರಮ್ಮಕಾಗಿ.
6. ಜಿಲ್ಲಾ ಖಜಾನಾಧಿಕಾರಿಗಳು, ಖಜಾನೆ ಇಲಾಖೆ,ಹಾಸನ ರವರ ಮಾಹಿತಿಗೆ.
7. ಉಪ ಖಜಾನಾಧಿಕಾರಿಗಳು ____________ ತಾಲ್ಲೂಕು ರವರ ಮಾಹಿತಿಗೆ.
8. ಜಿಲ್ಲೆಯ ಎಲ್ಲಾ ಇಲಾಖಾ ಮುಖ್ಯಸ್ಥರಿಗೆ ಮಾಹಿತಿಗಾಗಿ ಕಳುಹಿಸಿದೆ. (DW & Ch.O. ...)
9. ಕಛೇರಿ ಪ್ರತಿ.

ಮುಖ್ಯ ಲೆಕ್ಕಾಧಿಕಾರಿ
ಜಿಲ್ಲಾಪಂಚಾಯತ್,ಹಾಸನ.

TP-1